ಊ) ಪಡಿತರ ಚೀಟಿಗಳನ್ನು ಪಡಿತರ ವ್ಯವಸ್ಥೆಯಲ್ಲಿ ಉಪಯೋಗಕ್ಕಾಗಿ ಮಾತ್ರ ನೀಡಲಾಗುತ್ತದೆ. ಗುರುತಿನ ಚೀಟಿಯನ್ನಾಗಿ ಉಪಯೋಗಿಸುವುದು ನಿಯಮ ಬಾಹಿರ.

ಊ) ಸದರಿ ವ್ಯವಸ್ಥೆ ಉತ್ತಮವಾಗಿ ನಡೆಯುತ್ತಿರುವುದರಿಂದ ರದ್ದುಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಮುದಾಯ ಭವನ ನಿರ್ಮಾಣ

211 (203) ಶ್ರೀ ರಾಮಸ್ವಾಮಿಗೌಡ, ಬಿ. ಬಿ. (ಕುಣಿಗಲ್):–ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ 'ಸಮುದಾಯ ಭವನ'ಗಳ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಪರಿಶಿಷ್ಟ ಜನಾಂಗ ವಾಸಿಸುತ್ತಿರುವ ಪ್ರದೇಶಗಳಲ್ಲಿ ಈ ಭವನಗಳನ್ನು ನಿರ್ಮಾಣ ಮಾಡಲು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಎ. ನಾರಾಯಣಸ್ವಾಮಿ (ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):–

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಮೂಲಭೂತ ಸೌಕರ್ಯಗಳಿಗೆ ಅನುದಾನ

212 (204) ಶ್ರೀ ರಾಮಸ್ವಾಮಿ ಗೌಡ, ಬಿ. ಬಿ. (ಕುಣಿಗಲ್):–ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ ಕನಿಷ್ಟ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಪರಿಶಿಷ್ಟ ಜನಾಂಗ ವಾಸಸಿಸುತ್ತಿರುವ ಪ್ರದೇಶಗಳಲ್ಲಿ ಈ ಕನಿಷ್ಟ

ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಈ ಮೂಲಭೂತ ಸೌಕರ್ಯಗಳಿಗಾಗಿ ಕೇಂದ್ರ ಸರ್ಕಾರದ ಅನುದಾನಗಳನ್ನು ಬಯಸಿ, ರಾಜ್ಯ ಸರ್ಕಾರ ಎಷ್ಟು ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರದ ಮುಂದಿಟ್ಟಿದೆ; (ಕುಣಿಗಲ್ ತಾಲ್ಲೂಕಿಗೆ ಸೀಮಿತವಾಗಿ ಉತ್ತರಗಳನ್ನು ಒದಗಿಸುವುದು)

ಈ) ಎಷ್ಟು ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುದಾನಗಳನ್ನು ಬಿಡುಗಡೆ ಮಾಡಿದೆ;

ಶ್ರೀ ಎ. ನಾರಾಯಣಸ್ವಾಮಿ (ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):–

ಅ) ಹೌದು

ಆ) ಮೂಲಭೂತ ಸೌಲಭ್ಯ ಕಲ್ಪಿಸಲು ಅನುದಾನ ನೀಡಲಾಗುತ್ತಿದೆ. ಸಂಬಂಧಿಸಿದ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಇರುವ ಸಮಿತಿ ಮೂಲಕ ಆಯ್ಕೆ ಮಾಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಇ) ಕುಣಿಗಲ್ ತಾಲ್ಲೂಕಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಅನುದಾನ ಬಯಸಿ ರಾಜ್ಯ ಸರ್ಕಾರವು ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸಿರುವುದಿಲ್ಲ.

ಈ) ಅನ್ವಯಿಸುವುದಿಲ್ಲ

ದಲಿತರಿಗೆ ವಿಚಾರ ಸಂಕೀರ್ಣ ಮತ್ತು ಕಮ್ಮಟ

213 (206) ಶ್ರೀ ರಾಮಸ್ವಾಮಿ ಗೌಡ, ಬಿ. ಬಿ. (ಕುಣಿಗಲ್):–ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಣಿಗಲ್ ತಾಲ್ಲೂಕಿನಲ್ಲಿ ದೌರ್ಜನ್ಯಕ್ಕೆ, ಅಸ್ಪೃಶ್ಯತೆಗೆ ಬಲಿಯಾಗುವ ದಲಿತರ ರಕ್ಷಣೆ ಮಾಡುವ ಸಲುವಾಗಿ, ಪ್ರತಿ ಗ್ರಾಮಗಳವಾರು ದಲಿತರಿಗೆ, ನಾಯಕರುಗಳಿಗೆ, ಸಂಘಟನೆಗಳಿಗೆ ಕರೆಯೋಲೆಗಳನ್ನು ಕಳುಹಿಸಿ, ಸರ್ಕಾರದ ಕಾರ್ಯಕ್ರಮಗಳಂತೆ 'ವಿಚಾರ ಸಂಕೀರ್ಣ ಮತ್ತು ಕಮ್ಮಟ' ಗಳನ್ನು ಏರ್ಪಡಿಸುವಂತೆ ಸ್ಥಳೀಯ ಶಾಸಕರು ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈವರೆಗೂ ಒಂದೂ ಕಾರ್ಯಕ್ರಮಗಳನ್ನು ರೂಪಿಸದಿರಲು ಕಾರಣಗಳೇನು;